# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ | 33 |
| ಮಾನ್ಯ ಸದಸ್ಯರ ಹೆಸರು | ಶ್ರೀ ಛಲವಾದಿ ಟಿ. ನಾರಾಯಣ ಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 04.12.2023 |
| ಉತ್ತರಿಸುವ ಸಚಿವರು | ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಸಂಜಯಗಾಂಧಿ ಟ್ರಾಮ ಮತ್ತು ಅಸ್ಥಿ ಚಿಕಿತ್ಸಾ ಸಂಸ್ಥೆಯು ಫೆಲೋಶಿಫ್ ಹುದ್ದೆಗೆ ನಡೆಸಿದ ಪರೀಕ್ಷೆಯಲ್ಲಿ ಪ್ರಶ್ನೆ ಪತ್ರಿಕೆ ತಿದ್ದುಪಡಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; ಇಂತಹ ಅಕ್ರಮಗಳಿಂದ ಅರ್ಹ ಪ್ರತಿಭಾವಂತ ಅಭ್ಯರ್ಥಿಗಳಿಗೆ ಅನ್ಯಾಯವೆಸಗಿದಂತೆ ಆಗುವುದಿಲ್ಲವೇ; | ಸಂಜಯಗಾಂಧಿ ಟ್ರಾಮ ಮತ್ತು ಅಸ್ಥಿ ಚಿಕಿತ್ಸಾ ಸಂಸ್ಥೆಯಲ್ಲಿ ಫೆಲೋಶಿಪ್ ಕೋರ್ಸ್‌ಗೆ ನಡೆಸಿದ ಪರೀಕ್ಷೆಯಲ್ಲಿ ಪ್ರಶ್ನೆ ಪತ್ರಿಕೆ ತಿದ್ದುಪಡಿಯಾಗಿರುವುದಿಲ್ಲ. ಆದರೆ ಸಂಸ್ಥೆಯ ನಿರ್ದೇಶಕರು ರೋಗರುಜಿನ ಶಾಸ್ತ್ರ ತಜ್ಞರಾಗಿದ್ದು, ಸದರಿಯವರು ಶೇಕಡ 50 ರಷ್ಟು ಪ್ರಶ್ನೆಗಳನ್ನು ತಜ್ಞರಿಂದ ಹೊಂದಿಸಿ, ಉಳಿದ ಶೇಕಡ 50 ರಷ್ಟು ಪ್ರಶ್ನೆಗಳನ್ನು ನಿರ್ದೇಶಕರು ಅವರ ಹಂತದಲ್ಲಿಯೇ General MCQ's ಪ್ರಶ್ನೆಗಳನ್ನಾಗಿ 2023-24ನೇ ಸಾಲಿನ ಫೆಲೋಶಿಪ್ ಕೋರ್ಸ್‌ಗಳ ಪ್ರಶ್ನೆ ಪತ್ರಿಕೆಗೆ ಹೊಂದಿಸಿರುತ್ತಾರೆ. ಈ ಕ್ರಮವು ಅವೈಜ್ಞಾನಿಕ ಮತ್ತು ಸ್ವೀಕಾರರ್ಹವಾದುದಲ್ಲವೆಂದು ಕಂಡುಬಂದ ಹಿನ್ನಲೆಯಲ್ಲಿ ಸಂಸ್ಥೆಯಲ್ಲಿ ನಡೆಸಲಾದ ಫೆಲೋಶಿಪ್ ಪರೀಕ್ಷೆಯನ್ನು ರದ್ದುಪಡಿಸಿ, ಸದರಿ ಫೆಲೋಶಿಪ್ ಪ್ರವೇಶ ಪರೀಕ್ಷೆಯನ್ನು ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆಯ ಮೂಲಕ ಹೊಸದಾಗಿ ನಡೆಸಿ ನಿಯಮಾನುಸಾರ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗಿರುತ್ತದೆ. |
| ಆ) | ಫೆಲೋಶಿಫ್ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳನ್ನು ತಜ್ಞರಲ್ಲದವರಿಂದ ತಯಾರಿಸಲಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತಪ್ಪಿತಸ್ಥರ ವಿರುದ್ಧ ಹಾಗೂ ಪ್ರಮಾದಗಳು ಮರುಕಳಿಸದಂತೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು: | ಬಂದಿದೆ.<br><br>ಫೆಲೋಶಿಪ್ ಪ್ರವೇಶ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳನ್ನು ನಿಯಮಾನುಸಾರ ವಿಷಯ ತಜ್ಞರಿಂದ ರೂಪಿಸಿ ನಿರ್ವಹಿಸದೇ, ಬೇರೊಂದು ವಿಷಯದಲ್ಲಿ ತಜ್ಞತೆ ಹೊಂದಿದ ನಿರ್ದೇಶಕರು ಪ್ರಶ್ನೆಪತ್ರಿಕೆಯನ್ನು ಹೊಂದಿಸುವ ಕರ್ತವ್ಯಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದ ಹಿನ್ನೆಲೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ ಎಂಇಡಿ 478 ಎಂಎಂಸಿ 2023, ದಿನಾಂಕ: 30.08.2023 |

| | | |
|---|---|---|
| ಇ) | ಪಾರದರ್ಶಕವಾಗಿ ಪರೀಕ್ಷೆಗಳನ್ನು ನಡೆಸಿ ಅರ್ಹ ಅಭ್ಯರ್ಥಿಗಳಿಗೆ ಅನ್ಯಾಯವಾಗದಂತೆ ಸರ್ಕಾರ ಕೈಗೊಂಡ ಕ್ರಮಗಳೇನು? (ಸಂಪೂರ್ಣ ನೀಡುವುದು) | ರಲ್ಲಿ ಡಾ: ಎಂ.ಆರ್. ನಿರಂಜನ್ ಗೌಡ, ನಿರ್ದೇಶಕರು (ಪ್ರ) ಸಂಜಯಗಾಂಧಿ ಟ್ರಾಮ ಮತ್ತು ಅಸ್ಥಿ ಚಿಕಿತ್ಸಾ ಸಂಸ್ಥೆ ಬೆಂಗಳೂರು ಇವರ ವಿರುದ್ಧ / ಇಲಾಖಾ ವಿಚಾರಣೆ ಬಾಕಿ ಇರಿಸಿ ಸೇವೆಯಿಂದ ಅಮಾನತ್ತುಗೊಳಿಸಲಾಗಿದೆ. ದಿನಾಂಕ: 15.09.2023ರಂದು ನೋಟೀಸ್ ಜಾರಿ ಮಾಡಿ, ಶಿಸ್ತು ಕ್ರಮವನ್ನು ಪ್ರಾರಂಭಿಸಲಾಗಿದೆ.<br><br>ಈ ರೀತಿಯ ಪ್ರಮಾದಗಳು ಮರುಕಳಿಸದಂತ ಫೆಲೋಶಿಪ್ ಕೋರ್ಸ್‌ಗೆ ಪರೀಕ್ಷೆಗಳನ್ನು ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಮಾರ್ಗಸೂಚಿಗಳನ್ವಯ ಹಾಗೂ ಸರ್ಕಾರದಿಂದ ಕಾಲಕಾಲಕ್ಕೆ ಹೊರಡಿಸುವ ಆದೇಶಗಳ ಅನುಸಾರ ಪಾರದರ್ಶಕವಾಗಿ ಹಾಗೂ ಕ್ರಮಬದ್ಧವಾಗಿ ನಡೆಸಲು ಕ್ರಮವಹಿಸಲಾಗುವುದು. |

ಸಂಖ್ಯೆ: ಎಂಇಡಿ 677 ಎಂಎಂಸಿ 2023

(ಡಾ|| ಶರಣಪ್ರಕಾಶ ಆರ್. ಪಾಟೀಲ)
ವೈದ್ಯಕೀಯ ಶಿಕ್ಷಣ ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ
ಮತ್ತು ಜೀವನೋಪಾಯ ಸಚಿವರು